# <u>ಕರ್ನಾಟಕ ಸರ್ಕಾರ</u>

ಸಂಖ್ಯೆ : ಕೃತೋಇ 119 ಕೃವಿವಿ 2011 (ಭಾಗ-2)

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 02-08-2011.

## <u>ಸುತ್ತೋಲೆ</u>

ವಿಷಯ : ಕೃಷಿ ವಿಶ್ವವಿದ್ಯಾಲಯಗಳ ಮೂಲಕ ಜಾರಿಗೊಳಿಸುತ್ತಿರುವ ಸಮಗ್ರ ಕೃಷಿ ಪದ್ಧತಿಗೆ ಪ್ರೋತ್ಸಾಹ/ಆದ್ಯತೆ ಯೋಜನೆಗೆ ಜಿಲ್ಲಾ ಮಟ್ಟದಲ್ಲಿರುವ ಎಲ್ಲಾ ಇಲಾಖೆಗಳ ಸಹಯೋಗ ಮತ್ತು ಸಹಕಾರವನ್ನು ಒದಗಿಸುವ ಬಗ್ಗೆ.

- - - -

ಮಾನ್ಯ ಮುಖ್ಯಮಂತ್ರಿಯವರು ದಿನಾಂಕ : 24-02-2011ರಂದು ಮಾಡಿದ ಕೃಷಿ **<u>ಆಯವ್ಯಯ ಭಾಷಣದ</u>**-ಕಂಡಿಕೆ-49ರಲ್ಲಿ **<u>"ಸಮಗ್ರ ಕೃಷಿಗೆ ಆದ್ಯತೆ"</u>** ಕುರಿತಂತೆ ಕೃಷಿ ಆದಾಯವನ್ನು ಹೆಚ್ಚಿಸಲು ಪರಿಪೂರ್ಣವಾದ ಕ್ರಮಗಳನ್ನು ಅನುಸರಿಸುವ ಮೂಲಕ ಕೃಷಿ ವ್ಯವಸ್ಥೆಯನ್ನು ಪುನಃಶ್ಚೇತನಗೊಳಿಸುವ ಅವಶ್ಯಕತೆ ಇದ್ದು ರಾಜ್ಯದಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸುವುದು ಅವಶ್ಯಕವಾಗಿದ್ದು ಮೊದಲ ವರ್ಷದಲ್ಲಿ ಪ್ರಾಯೋಗಿಕವಾಗಿ ಪ್ರತಿ ವಿಶ್ವವಿದ್ಯಾಲಯವು ಕನಿಷ್ಠ 25,000 ಹೆಕ್ಟೇರ್ ಪ್ರದೇಶಗಳಲ್ಲಿ ಈ ಪದ್ಧತಿಯನ್ನು 2011ರ ಮುಂಗಾರಿನಿಂದ ಅನುಷ್ಠಾನಗೊಳಿಸಲಿದ್ದು ರಾಜ್ಯದಲ್ಲಿ ಒಟ್ಟು 1,25,000 ಹೆಕ್ಟೇರ್ ಪ್ರದೇಶದಲ್ಲಿ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ಒಟ್ಟು 75.00 ಕೋಟಿ ರೂಪಾಯಿಗಳನ್ನು ಇದಕ್ಕಾಗಿ ನೀಡಲಾಗುವುದೆಂದು ಘೋಷಿಸಿರುತ್ತಾರೆ.

ಸಮಗ್ರ ಕೃಷಿ ಪದ್ಧತಿಯನ್ನು ಕೃಷಿ ವಿಶ್ವವಿದ್ಯಾಲಯಗಳ ಮೂಲಕ ರಾಜ್ಯದಲ್ಲಿ ಅಳವಡಿಸುವ ಸಲುವಾಗಿ ರಾಜ್ಯದಲ್ಲಿನ ಬೆಂಗಳೂರು, ಧಾರವಾಡ ಮತ್ತು ರಾಯಚೂರು ಕೃಷಿ ವಿಶ್ವವಿದ್ಯಾಲಯಗಳಿಂದ ವರದಿಗಳನ್ನು ಪಡೆದು ಪರಿಶೀಲಿಸಲಾಗಿದೆ. ಸಮಗ್ರ ಕೃಷಿ ಪದ್ಧತಿಯಲ್ಲಿ ಸುಸ್ಥಿರ ಉತ್ಪಾದನೆ ಮತ್ತು ಆದಾಯ ಹೆಚ್ಚಿಸುವುದು ಹಾಗೂ ರೈತರ ಮತ್ತು ಭೂರಹಿತ ಕಾರ್ಮಿಕರ ಜೀವನ ಮಟ್ಟ ಸುಧಾರಿಸುವ ಮುಖ್ಯೋದ್ದೇಶದಿಂದ ಅಗತ್ಯವಾದ ತರಬೇತಿ, ಸಂಶೋಧನೆ, ತಾಂತ್ರಿಕತೆ ಮತ್ತು ಮಾರುಕಟ್ಟೆಗೆ ಸಂಬಂಧಿಸಿದಂತೆ ಮುಖ್ಯವಾದ ಮಾಹಿತಿಯನ್ನು ಒದಗಿಸುವುದು ಮತ್ತು ವಿವಿಧ ಬೆಳೆಗಳನ್ನು ಬೆಳೆಯುವುದು ಮುಂತಾದ ಕಾರ್ಯಕ್ರಮಗಳ ತೊಡಗಿಕೊಳ್ಳಲು ಈ

..2

ಯೋಜನೆಯನ್ನು ರೂಪಿಸಿದ್ದು ಸಂಬಂಧಿಸಿದ ಎಲ್ಲಾ ಇಲಾಖೆಗಳ ಸಹಯೋಗದಿಂದ ಅನುಷ್ಠಾನಗೊಳ್ಳಬೇಕಾಗಿದೆ.

ಸಮಗ್ರ ಕೃಷಿ ಪದ್ಧತಿಯನ್ನು ಜಾರಿಗೊಳಿಸಲು ರಾಜ್ಯಮಟ್ಟದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಭಿವೃದ್ಧಿ ಆಯುಕ್ತರು, ಪ್ರಧಾನ ಕಾರ್ಯದರ್ಶಿ (ಕೃಷಿ) ಮತ್ತು ಸಂಬಂಧಪಟ್ಟ ಅಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿ ಮತ್ತು ನಾಬಾರ್ಡ್ ಸಂಸ್ಥೆಯವರು ರಾಜ್ಯ ಮಟ್ಟದ ನೋಡಲ್ ಸಂಸ್ಥೆಯಾಗಿರುತ್ತದೆ. ಕೃಷಿ ವಿಶ್ವವಿದ್ಯಾಲಯದ ಮಟ್ಟದಲ್ಲಿ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಿರ್ವಹಣಾ ಸಮಿತಿಯಿದ್ದು ಜಿಲ್ಲಾ ಮಟ್ಟದಲ್ಲಿ ಕೃಷಿ ವಿಶ್ವವಿದ್ಯಾಲಯದ ಸಂಬಂಧಪಟ್ಟ ಡೀನ್ ಸ.ಸಂ.ನಿ/ಸ.ವಿ.ನಿ ಅಧ್ಯಕ್ಷತೆಯಲ್ಲಿ ಸಂಯೋಜನಾ ಸಮಿತಿ ಇರುತ್ತದೆ. ಇವರದೇ ಅಧ್ಯಕ್ಷತೆಯ ಸಮಿತಿಯಲ್ಲಿ ಅನುಷ್ಠಾನಗೊಳಿಸುವ ಕಾರ್ಯಕ್ರಮವನ್ನು ಜಾರಿಗೊಳಿಸಲಾಗುತ್ತದೆ. ಉದ್ದೇಶಕ್ಕಾಗಿ ಕೃಷಿ ವಿಶ್ವವಿದ್ಯಾಲಯಕ್ಕೆ ಸರ್ಕಾರದ ಕೃಷಿ, ತೋಟಗಾರಿಕೆ, ಪಶುಸಂಗೋಪನೆ, ಹೈನುಗಾರಿಕೆ, ಅಭಿವೃದ್ಧಿ, ಸಹಕಾರ, ಮಾರುಕಟ್ಟೆ ಇಲಾಖೆಗಳು, ಕೃಷಿ ಸಂಶೋಧನಾ/ವಿಸ್ತರಣಾ ಕೇಂದ್ರಗಳು, ಬೀಜೋತ್ಪಾದನೆ ಘಟಕಗಳು, ಲೀಡ್ ಬ್ಯಾಂಕುಗಳು, ಕೃಷಿ ವಿಜ್ಞಾನ ಕೇಂದ್ರಗಳು, ರೈತ ಸಂಪರ್ಕ ಕೇಂದ್ರಗಳು ಮುಂತಾದವುಗಳು ಯೋಜನೆಯ ಮುಂದಾಳತ್ವ ವಹಿಸಿರುವ ಕೃಷಿ ವಿಶ್ವವಿದ್ಯಾಲಯದ ಸಮಿತಿ/ಅಧಿಕಾರಿ ನಿಗಧಿಪಡಿಸುವ ಸೂಚನೆಗಳಡಿ ಕಾರ್ಯಕ್ರಮ ಅನುಷ್ಠಾನಕ್ಕೆ ಸಹಕರಿಸಬೇಕಾಗುತ್ತದೆ.

ಸಮಗ್ರ ಕೃಷಿ ಪದ್ಧತಿ ಯೋಜನೆಯನ್ನು ಅನುಷ್ಠಾನಗೊಳಿಸಲು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಅಡಿಯಲ್ಲಿ ಪ್ರತಿ ಕೃಷಿ ವಿಶ್ವವಿದ್ಯಾಲಯಕ್ಕೆ 13.00 ಕೋಟಿ ರೂಪಾಯಿಗಳಂತೆ ಒಟ್ಟು 52.00 ಕೋಟಿ ರೂಪಾಯಿಗಳನ್ನು ನಿಗಧಿಪಡಿಸುವ ಪ್ರಸ್ತಾವನೆಗೆ ದಿನಾಂಕ : 29–04–2011ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ SLSC ಸಭೆಯಲ್ಲಿ ಅನುಮೋದಿಸಲಾಗಿರುತ್ತದೆ.

ಆದುದರಿಂದ ಜಿಲ್ಲಾ ಮಟ್ಟದಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಪ್ರೋತ್ಸಾಹಗೊಳಿಸಲು ರೂಪಿಸಿ ಜಾರಿಗೆ ತರಲಾಗುವ ಯೋಜನೆಯಲ್ಲಿ ತಮ್ಮ ತಮ್ಮ ಯೋಜನೆಗಳನ್ನು ಸಮಗ್ರ ಕೃಷಿ ಪದ್ಧತಿ ಯೋಜನೆಗೆ ಆಯ್ಕೆಯಾದ ಭಾಗದಲ್ಲಿ ಸಕ್ರಿಯವಾಗಿ ಭಾಗವಹಿಸಿ ಅವಶ್ಯವಾದ ಎಲ್ಲಾ ಸಹಯೋಗ–ಸಹಕಾರಗಳನ್ನು ನೀಡುವ ಮೂಲಕ ಕೃಷಿ ವಿಶ್ವವಿದ್ಯಾಲಯಗಳು ನಿಗಧಿಪಡಿಸಲಾದ

...3

ಅಧಿಕಾರಿಗಳ ಮುಂದಾಳತ್ವದಲ್ಲಿ ನೀಡುವ ಸೂಚನೆಗಳನ್ನು ಅನುಸರಿಸಿ ಕಾರ್ಯಕ್ರಮವನ್ನು ಫಲಪ್ರದವಾಗಿ ಜಾರಿಗೆ ತರಲು ಜಿಲ್ಲಾ ಮಟ್ಟದ ಎಲ್ಲಾ ಇಲಾಖಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹಕರಿಸುವಂತೆ ಕೋರಲಾಗಿದೆ. ಈ ಬಗ್ಗೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಸಭೆ ನಡೆಸಿ ಪ್ರಗತಿ ಪರಿಶೀಲಿಸಲು ಕೋರಿದೆ.

(ಮಂಜುನಾಥ ಪಾಟೀಲ್).
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ :-

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,

ಪ್ರತಿ :-

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ. ವಿಧಾನ ಸೌಧ. ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ. ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಪಶು ಸಂಗೋಪನೆ ಹಾಗೂ ಮೀನುಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
12. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
13. ಕುಲಪತಿಯವರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
14. ಕುಲಪತಿಯವರು, ತೋಟಗಾರಿಕಾ ವಿಶ್ವವಿದ್ಯಾಲಯ, ಬಾಗಲಕೋಟೆ-587 102.
15. ಕುಲಪತಿಯವರು, ಪಶು ಸಂಗೋಪನೆ ಮತ್ತು ಮೀನುಗಾರಿಕಾ ವಿಶ್ವವಿದ್ಯಾಲಯ, ಬೀದರ್-585 401.
16. ಕುಲಸಚಿವರುಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
17. ಸರ್ಕಾರದ ಅಧೀನ ಕಾರ್ಯದರ್ಶಿ, ಕೃಷಿ ಇಲಾಖೆ (ಕೃಷಿ ಯೋಜನೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.